1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು

ಸಿ.ಸಿಃ 1950/2014

| | | | |
|---|---|---|---|
| ಸಾಕ್ಷಿದಾರರ ಹೆಸರು | | ಮಹದೇವಸ್ವಾಮಿ | ಫ್ರಾಸಾಃ 2 |
| ತಂದೆಯ/ಗಂಡನ ಹೆಸರು | | ದೊಡ್ಡಸಿದ್ದಯ್ಯ | ಚಾಸಾಃ 3 |
| ವಯಸ್ಸು | | 34 ವರ್ಷ | |
| ಕೆಲಸ | | ಕೂಲಿ ಕೆಲಸ | ಸಾ ಪ್ರ ಬೋ |
| ವಾಸ | | ಹನುಮನಪುರ ಗ್ರಾಮ | ದಿಃ 17/02/2021 |

ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿದ್ದು ಅದು ಸ್ಥಳ ಮಹಜರ್ ಆಗಿದ್ದು ಅದನ್ನು ನಿಪಿ-2 ಎಂದು ಈಗಾಗಲೇ ಗುರುತಿಸಲಾಗಿದೆ, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಸುಮಾರು 7 ವರ್ಷಗಳ ಹಿಂದೆ ಪೋಲಿಸರ ಕೋರಿಕೆಯ ಮೇರೆಗೆ ನಿಪಿ-2 ಕ್ಕೆ ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಎ.ಪಿ.ಪಿ.ಯವರಿಂದಃ

ದಿನಾಂಕ 05.07.2014 ರಂದು ಪೋಲಿಸರು ಚಾಸಾ-1 ರವರ ಮನೆಯಲ್ಲಿ ಆರೋಪಿಯು ಚಾಸಾ-1 ರವರಿಗೆ ಮಾನಸಿಕವಾಗಿ ಮತ್ತು ದೈಹಿಕವಾಗಿ ಕಿರುಕುಳ ನೀಡಿದ ವಿಚಾರದಲ್ಲಿ ಸ್ಥಳ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಾನು, ಚಾಸಾ-1 ಮತ್ತು 2 ರವರು ಹಾಜರಿದ್ದೆವು ಎಂದರೆ ಸರಿಯಲ್ಲ. ಮಹಜರ್ ಅನ್ನು 11.30 ಇಂದ 12.00 ಗಂಟೆಯವರೆಗೆ ಬರೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.
ಮರು ವಿಚಾರಣೆ ಇಲ್ಲ,
ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ ಎಂ ಓ

ಸಹಿ/-

1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ,
ನಂಜನಗೂಡು